ವಾರ್ಡುಗಳಲ್ಲಿ ಬೆಡ್ಡುಗಳ ಕೊರತೆ

296(724) **ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು):–** ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

(ಅ) ಗೌರಿಬಿದನೂರು ಪಟ್ಟಣದ ಆಸ್ಪತ್ರೆಗೆ ಪ್ರತಿದಿನ ಹೊರ ರೋಗಿಗಳ ಸಂಖ್ಯೆ ಹೆಚ್ಚಾಗಿದ್ದು (500 ಕ್ಕೂ ಹೆಚ್ಚು) ವಾರ್ಡುಗಳು ಮತ್ತು ಬೆಡ್ಡುಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಆಸ್ಪತ್ರೆಯಲ್ಲಿ 250 (100 ರಿಂದ 250) ಬೆಡ್ಡುಗಳನ್ನು ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸಕ್ತ ವರ್ಷದಲ್ಲಿ ಸರ್ಕಾರ ಚಿಂತಿಸಿದೆಯೇ; ಹಾಗಿದ್ದಲ್ಲಿ, ಸರ್ಕಾರ ಕ್ರಮಕೈಗೊಳ್ಳುವುದೇ?

(ಇ) ಗೌರಿಬಿದನೂರು ಆಸ್ಪತ್ರೆಯಲ್ಲಿ ಸ್ಕ್ಯಾನಿಂಗ್ ಮಿಶಿನ್ ಪದೇ ಪದೇ ಕೆಟ್ಟು ಹೋಗುತ್ತಿದ್ದು ರೋಗಿಗಳಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೊಸ ಸ್ಕ್ಯಾನಿಂಗ್ ಮಿಷನ್ ನೀಡಲು ಸರ್ಕಾರ ಕ್ರಮಕೈಗೊಳ್ಳುವುದೇ? (ವಿವರ ಒದಗಿಸುವುದು)

ಶ್ರೀ ಅರವಿಂದ ಲಿಂಬಾವಳಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :–

(ಅ) 400 ರಿಂದ 500 ಜನ ಹೊರ ರೋಗಿಗಳಾಗಿ ಬರುತ್ತಿದ್ದು, 40 ರಿಂದ 60 ಜನ ರೋಗಿಗಳು ಒಳ ರೋಗಿಗಳಾಗಿ ದಾಖಲಾಗುತ್ತಿರುವುದು ಗಮನಕ್ಕೆ ಬಂದಿದೆ.

(ಆ) ರಾಜ್ಯದಲ್ಲಿ ಹೊಸ ಆಸ್ಪತ್ರೆಗಳ ಪ್ರಾರಂಭಿಸುವಿಕೆ ಮತ್ತು ಮೇಲ್ದರ್ಜೆಗೇರಿಸುವಿಕೆಗೆ ಬದಲಾಗಿ ಅಸ್ತಿತ್ವದಲ್ಲಿರುವ ಆಸ್ಪತ್ರೆಗಳಿಗೆ ಮೂಲ ಸೌಕರ್ಯಗಳಾದ ಕಟ್ಟಡ, ಉಪಕರಣಗಳು, ವೈದ್ಯರು ಮತ್ತು ಸಿಬ್ಬಂದಿ ಒದಗಿಸಿ ಅವುಗಳ ಬಲವರ್ಧನೆಗೆ ಹೆಚ್ಚು ಗಮನಹರಿಸಬೇಕಾಗಿದೆ. ಆದುದರಿಂದ, ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಿರುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿಯ ಮೇಲ್ದರ್ಜೆ ಗೇರಿಸುವಿಕೆಯನ್ನು ದಿನಾಂಕ: 11–1–2011 ರಿಂದ ಮೂರು ವರ್ಷಗಳ ಅವಧಿಗೆ ಒಂದು ನೀತಿ ನಿರ್ಣಯವಾಗಿ ಸರ್ಕಾರವು ತಡೆಹಿಡಿದಿದೆ.

(ಇ) ಸ್ಕ್ಯಾನಿಂಗ್ ಯಂತ್ರವನ್ನು ಈಗ ದುರಸ್ತಿಗೊಳಿಸಲಾಗಿದ್ದು, ಅದು ಪ್ರಸ್ತುತ

ಕಾರ್ಯನಿರ್ವಹಿಸುತ್ತಿದೆ. ಹಣಕಾಸು ಲಭ್ಯತೆ ಆಧಾರದ ಮೇಲೆ ಹೊಸ ಸ್ಕ್ಯಾನಿಂಗ್ ಮೆಷಿನ್ ಒದಗಿಸುವ ಕುರಿತು ಕ್ರಮ ವಹಿಸಬೇಕಾಗುತ್ತದೆ.

ಮಹಿಳಾ ವೈದ್ಯರ ನೇಮಕಾತಿ

192(379) ಶ್ರೀ ಅಮರೇಶ್ (ಮುಳಬಾಗಿಲು):– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

(ಅ) ಮುಳಬಾಗಿಲು ತಾಲ್ಲೂಕಿನ ಹೋಬಳಿಗಳಲ್ಲಿ ಇರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಮಹಿಳಾ ವೈದ್ಯರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಮಹಿಳಾ ವೈದ್ಯರ ನೇಮಕಾತಿಯನ್ನು ಯಾವ ಅವಧಿಯೊಳಗಾಗಿ ಪೂರ್ಣಗೊಳಿಸಲಾಗುವುದು;

(ಇ) ಹೋಬಳಿಗಳ ಆಸ್ಪತ್ರೆಯಲ್ಲಿ ರಾತ್ರಿಯ ಸಮಯದಲ್ಲಿಯೂ ವೈದ್ಯರುಗಳು ಇರುವ ಹಾಗೆ ಸರ್ಕಾರ ಕ್ರಮ ಕೈಗೊಂಡಿದೆಯೇ? (ವಿವರ ನೀಡುವುದು)

ಶ್ರಿ ಅರವಿಂದ ಲಿಂಬಾವಳಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ "ಮಹಿಳಾ ವೈದ್ಯಾಧಿಕಾರಿ" ಎಂಬ ವೃಂದ ಅಸ್ತಿತ್ವದಲ್ಲಿರುವುದಿಲ್ಲ.

(ಆ) ಮುಳಬಾಗಿಲು ತಾಲ್ಲೂಕಿನಲ್ಲಿ 17 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು. ಈ ಆರೋಗ್ಯ ಕೇಂದ್ರಗಳಲ್ಲಿನ ಎಲ್ಲಾ 17 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಭರ್ತಿಯಾಗಿವೆ. ಕಾರ್ಯನಿರತ ವೈದ್ಯರ ಪೈಕಿ ಇಬ್ಬರು ಮಹಿಳಾ ವೈದ್ಯರು ಸೇರಿದ್ದಾರೆ.

(ಇ) ಮೇಲ್ಕಂಡ 17 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪೈಕಿ, 10 ಪ್ರಾಥಮಿಕ ಆರೋಗ್ಯ ಕೇಂದ್ರಗಳು 27 x 7 ಕಾರ್ಯನಿರ್ವಹಿಸುವ ಕೇಂದ್ರಗಳಾಗಿದ್ದು, ಅವುಗಳಲ್ಲಿ ದಿನದ 24 ಗಂಟೆ ಹೆರಿಗೆ ಸೌಲಭ್ಯ ಲಭ್ಯವಿದೆ. ಈ ಪೈಕಿ ಹೋಬಳಿ ಮಟ್ಟದಲ್ಲಿ 04 ಪ್ರಾಥಮಿಕ ಆರೋಗ್ಯ ಕೇಂದ್ರಗಳು (ಅಂದರೆ ತಾಯಿಲೂರು ಟೈರ್‌ಕೂರ್, ಅವನಿ ಮತ್ತು ನಂಗಳಿ) 24 x 7ಕೇಂದ್ರಗಳಾಗಿ ಕಾರ್ಯನಿರ್ವಹಿಸುತ್ತಿವೆ. ಸದರಿ ಕೇಂದ್ರಗಳಲ್ಲಿ 03 ಶುಶ್ರೂಷಕರು ಪಾಳಿಯ ಮೇಲೆ ದಿನದ 24 ಗಂಟೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ವೈದ್ಯಾಧಿಕಾರಿಗಳು ರಾತ್ರಿಯ ವೇಳೆ ಕಾಲ್‌ಡ್ಯೂಟಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ.